

ಅರುಣ ಪಿ. ಭಟ್ಟ


## ವಾರಭವಿಷ್ಯ: 15.05.2025ರಿಂದ 21.05.2025ರವರೆಗೆ




ವಾರವಿಡೀ ಹಣಕಾಸಿನ ಹರಿವು ಹೆಚ್ಚಿಸಿಕೊಳ್ಳಲು ಹೊಸ ಆಯ್ಕೆಗಳು ಗೋಚರವಾಗುತ್ತವೆ. ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆಗಳು ಕಾಣಿಸಿಕೊಳ್ಳುತ್ತವೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಮಕ್ಕಳ ಮದುವೆ ಸಂಬಂಧ ಹುಡುಕುವ ಅವಕಾಶ ಹೆಚ್ಚಿದೆ. ವಾರದ ಮಧ್ಯಭಾಗದಲ್ಲಿ ಬಹುಮುಖ್ಯವಾದ ಸಂಗತಿಯೊಂದು ತಿಳಿದುಬರಲಿದೆ. ಶುಭದಿನ: 15. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವೃತ್ತಿಪರರಿಗೆ ಉತ್ತಮವಾದ ಸಮಯ ಇದು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವವರಿಗೆ ಯಶಸ್ಸು. ಕ್ರಿಯಾತ್ಮಕ ಕ್ಷೇತ್ರಗಳಲ್ಲಿ ತೊಡಗಿರುವವರಿಗೆ ಪ್ರಗತಿ ದೊರೆಯುವ ಸಮಯ ಇದು. ಅಧಿಕಾರದಲ್ಲಿ ಇರುವವರು ನಿಮ್ಮ ಶ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಲಿದ್ದಾರೆ. ಪೋಷಕರು ನಿಮ್ಮ ಪ್ರಗತಿಯಿಂದಾಗಿ ಬಹಳ ಸಂತೋಷಪಡಲಿದ್ದಾರೆ. ಶುಭದಿನ: 18. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.





ಉದ್ಯೋಗಕ್ಕೆ ಪ್ರಯತ್ನಿಸುತ್ತಿರುವವರಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಸ್ಪರ್ಧೆ, ಕ್ರೀಡೆಗಳಲ್ಲಿ ಯಶಸ್ಸು ದೊರೆಯಲಿದೆ. ಸಾಮಾಜಿಕ ಜೀವನದಲ್ಲಿ ಸಕ್ರಿಯರಾಗಿ ತೊಡಗಿಕೊಳ್ಳಲಿದ್ದೀರಿ. ಗೊಂದಲ ಹುಟ್ಟುಹಾಕಿದ್ದ ವಿಚಾರಗಳಿಗೆ ಪರಿಹಾರ ದೊರೆಯಲಿದೆ. ಮನೆಯಲ್ಲಿ ಶುಭ ಕಾರ್ಯ ದೇವತಾ ಕಾರ್ಯಗಳನ್ನು ಆಯೋಜನೆ ಮಾಡಲಿದ್ದೀರಿ. ಶುಭದಿನ: 20. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.





ಕಾನೂನು ವ್ಯಾಜ್ಯಗಳಲ್ಲಿ ಜಯ.  ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ದೂರ ಪ್ರಯಾಣ ಮಾಡುವ ಯೋಗವಿದೆ. ಉದ್ಯೋಗದಲ್ಲಿ ಮುಖ್ಯವಾದ ಜವಾಬ್ದಾರಿ ನಿರ್ವಹಿಸಲಿದ್ದೀರಿ. ನಿಮ್ಮ ಶ್ರಮ ಹಾಗೂ ದುಡಿಮೆಗೆ ಮೆಚ್ಚುಗೆ, ಮನ್ನಣೆ ದೊರೆಯಲಿದೆ. ಕ್ರಿಯಾತ್ಮಕ ಕ್ಷೇತ್ರದಲ್ಲಿ ತೊಡಗಿಕೊಂಡಿರುವವರಿಗೆ ವಾರಾಂತ್ಯದಲ್ಲಿ ಮನ್ನಣೆ ದೊರೆಯಲಿದೆ. ಶುಭದಿನ: 19. ಕಾಲ ಭೈರವನ ಸೇವೆ ಮಾಡಿರಿ.




ವೈವಾಹಿಕ ಜೀವನವು ಸಂತೋಷದಾಯಕವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಮುಖ್ಯವಾದ ಯೋಜನೆಯ ಮೇಲುಸ್ತುವಾರಿ ಸಲುವಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ವಿದೇಶದಲ್ಲೇ ನೆಲೆಯಾಗಬೇಕು ಎಂದು ಪ್ರಯತ್ನ ಮಾಡುತ್ತಿರುವವರಿಗೆ ವಿವಿಧ ಪ್ರಕ್ರಿಯೆಗಳು ಸರಾಗವಾಗಿ ಪೂರ್ಣಗೊಳ್ಳಲಿವೆ. ಶುಭದಿನ: 18. ಈಶ್ವರನಿಗೆ ತಿಲಾರ್ಚನೆ ಮಾಡಿರಿ.





ಗೌರವ ಸನ್ಮಾನ ಪಡೆಯುವ ಅವಕಾಶ ಇದೆ. ಹಿರಿಯ ಅಧಿಕಾರಿಗಳ ಜೊತೆಗೆ ಚರ್ಚೆ ನಡೆಸುವ ಸಾಧ್ಯತೆ ಇದೆ. ಪ್ರತಿಸ್ಪರ್ಧಿಗಳ ವಿರುದ್ಧ ಮೇಲುಗೈ ಸಾಧಿಸಲಿದ್ದೀರಿ. ಆರೋಗ್ಯದಲ್ಲಿ ಸ್ವಲ್ಪಮಟ್ಟಿಗೆ ಏರುಪೇರಾಗಲಿದೆ. ಆಹಾರ ನೀರು ಸೇವನೆಯ ಬಗ್ಗೆ ಎಚ್ಚರ ಇರಲಿ. ವಾರದ ಮಧ್ಯ ಭಾಗದಲ್ಲಿ ವೈಯಕ್ತಿಕ ಬದುಕಿಗೆ ಸಂಬಂಧಪಟ್ಟಂತೆ ಶುಭ ಸುದ್ದಿ ಕೇಳಲಿದ್ದೀರಿ. ಶುಭದಿನ: 16. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.





ವಿವಿಧ ಕ್ಷೇತ್ರಗಳಲ್ಲಿ ಪ್ರಗತಿ ಪಡೆಯಲಿದ್ದೀರಿ. ಪ್ರೀತಿಪಾತ್ರರ ಜೊತೆಗೆ ಮನರಂಜನೆಗೆ, ಫ್ಯಾಷನ್ ವಸ್ತುಗಳ ಖರೀದಿಗೆ ಸಮಯ ಕಳೆಯಲಿದ್ದೀರಿ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಪಡೆಯುವ ಯೋಗ ಇದೆ. ಆರ್ಥಿಕ ವ್ಯವಹಾರಗಳು ಲಾಭದಾಯಕವಾಗಲಿದೆ. ಯಾವುದೇ ವಿಚಾರದಲ್ಲಿ ವ್ಯವಹಾರ ಮಾಡುವಾಗ ಸೂಕ್ಷ್ಮವಾಗಿ ವರ್ತಿಸಿ. ಮುಖ್ಯವಾದ ಒಪ್ಪಂದಕ್ಕೆ ಮುಂದಾಗಲಿದ್ದೀರಿ. ಶುಭದಿನ: 20. ಲಿಂಗಾಷ್ಟಕ ಓದಿರಿ.





ವೈಯಕ್ತಿಕ ಬದುಕು ಉತ್ತಮವಾಗಲಿದೆ. ಗೃಹ ನಿರ್ಮಾಣ ವಿಚಾರದಲ್ಲಿ ಪ್ರಗತಿ.  ಹಿರಿಯರು ಮೆಚ್ಚುಗೆ ಸೂಚಿಸಲಿದ್ದಾರೆ. ಮಕ್ಕಳು ಮಾಡುವ ಕೆಲಸಗಳಿಂದ ಹೆಮ್ಮೆ ಮೂಡಲಿದೆ. ವಾರದ ಮಧ್ಯ ಭಾಗದಲ್ಲಿ ಹಣಕಾಸು ಹರಿವು ಹೆಚ್ಚಲಿದೆ. ಹಣ ಗಳಿಕೆಗೆ ಹಲವು ದಾರಿಗಳು ಗೋಚರಿಸಲಿವೆ. ವಾರದ ಮಧ್ಯ ಭಾಗದಲ್ಲಿ ಪ್ರೀತಿಪಾತ್ರರ ಜೊತೆಗೆ ಹೆಚ್ಚು ಸಮಯ ಕಳೆಯಲಿದ್ದೀರಿ. ಶುಭದಿನ: 19. ಹನುಮಾನ್ ಚಾಲೀಸ್ ಓದಿರಿ.





ಬಡ್ತಿ ದೊರೆಯುವ ಸಮಯ ಇದು. ಸಮಾಜ ಸೇವಾ ಕ್ಷೇತ್ರದಲ್ಲಿ ಇರುವವರಿಗೆ ಮನ್ನಣೆ ಸಿಗಲಿದೆ. ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡುವುದರಿಂದ ಚಿಂತೆಗೆ ಕಾರಣವಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ಮನೆಯ ಚಟುವಟಿಕೆಗಳು ಬಿರುಸಾಗುತ್ತವೆ. ಗೃಹಾಲಂಕಾರದ ಕಡೆಗೆ ಗಮನ ನೀಡುತ್ತೀರಿ. ಹಳೆ ಸ್ನೇಹಿತರು ಶುಭ ಸುದ್ದಿ ನೀಡಲಿದ್ದಾರೆ. ಶುಭದಿನ: 18. ನವದುರ್ಗಾ ಆರಾಧನೆ ಮಾಡಿರಿ.




ಪಿತ್ರಾರ್ಜಿತವಾದ ಆಸ್ತಿ ವ್ಯವಹಾರಗಳು ನೀವು ಅಂದುಕೊಂಡಂತೆ ನಡೆಯುತ್ತವೆ. ಆಸ್ತಿ ವ್ಯವಹಾರದಲ್ಲಿ ಲಾಭ ಗಳಿಸಲಿದ್ದೀರಿ. ವಾರದ ದ್ವಿತೀಯಾರ್ಧದಲ್ಲಿ ಹಲವು ರೀತಿಯಲ್ಲಿ ಅವಕಾಶಗಳು ನಿಮಗೆ ದೊರೆಯಲಿವೆ. ಧಾರ್ಮಿಕ ವಿಚಾರಗಳಿಗೆ ಹೆಚ್ಚು ಸಮಯವನ್ನು ಮೀಸಲಿಡಲಿದ್ದೀರಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆಗಳಿವೆ. ಶುಭದಿನ: 17. ಚಂಡಿಪಾರಾಯಣ ಮಾಡಿರಿ.




ಮನೆಯಲ್ಲಿ ಪ್ರಶಾಂತವಾದ ವಾತಾವರಣ ಇರುತ್ತದೆ. ಪ್ರೀತಿಪಾತ್ರರ ಜೊತೆಗೆ ಮನರಂಜನೆ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದೀರಿ. ಹಿರಿಯ ಅಧಿಕಾರಿಗಳಿಂದ ಮೆಚ್ಚುಗೆಯ ಮಾತುಗಳನ್ನು ಕೇಳಲಿದ್ದೀರಿ. ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ಮಾಡಲಿದ್ದೀರಿ. ಸಂಬಂಧಿಕರ ಜೊತೆ ಬಂಧ ಗಟ್ಟಿಯಾಗಲಿದೆ. ಶುಭದಿನ: 16. ಸೌಂದರ್ಯ ಲಹರಿ ಪಠಿಸಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ನಿಮ್ಮ ಪರವಾಗಿ ತೀರ್ಪು ಬರುವ ಸಾಧ್ಯತೆಗಳು ಹೆಚ್ಚಿವೆ. ಮೇಲಧಿಕಾರಿಗಳಿಂದ ನಿರೀಕ್ಷಿತ ಮಟ್ಟದ ಪ್ರೋತ್ಸಾಹ, ಬೆಂಬಲ ದೊರೆಯಲಿದೆ. ಆರೋಗ್ಯದ ಬಗ್ಗೆ ನಿಯಮಿತವಾದ ಕಾಳಜಿ ತೆಗೆದುಕೊಳ್ಳುವುದು ಅಗತ್ಯ. ವಾರದ ಮಧ್ಯ ಭಾಗದಲ್ಲಿ ಶುಭ ಸುದ್ದಿಯನ್ನು ಕೇಳಲಿದ್ದೀರಿ. ಉದ್ಯೋಗಸ್ಥರಿಗೆ ಹೊಸ ಜವಾಬ್ದಾರಿಗಳು ಹೆಗಲೇರಲಿವೆ. ಶುಭದಿನ: 19. ವಿಷ್ಣು ಸಹಸ್ರನಾಮ ಪಠಿಸಿರಿ.